**ಕರ್ನಾಟಕ ವಿಧಾನ ಪರಿಷತ್ತು**
**ನೂರ ಐವತ್ತೇಳನೆಯ ಅಧಿವೇಶನ**

# ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ (ತಿದ್ದುಪಡಿ) ವಿಧೇಯಕ, 2025

**(2025ರ ವಿಧಾನಸಭೆಯ ವಿಧೇಯಕ ಸಂಖ್ಯೆ–77)**

**(ಕರ್ನಾಟಕ ವಿಧಾನಸಭೆಯಿಂದ ಅಂಗೀಕಾರವಾದ ರೂಪದಲ್ಲಿ)**

ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ಅಧಿನಿಯಮ, 1997ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ವಿಧೇಯಕ.

ಇಲ್ಲಿ ಇನ್ನುಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ಅಧಿನಿಯಮ, 1997ನ್ನು (2001ರ ಕರ್ನಾಟಕ ಅಧಿನಿಯಮ 33) ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು, ಭಾರತ ಗಣರಾಜ್ಯದ ಎಪ್ಪತ್ತಾರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ, ಎಂದರೆ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ (ತಿದ್ದುಪಡಿ) ಅಧಿನಿಯಮ, 2025 ಎಂದು ಕರೆಯತಕ್ಕದ್ದು.

(2) ಇದು, ಈ ಕೂಡಲೇ ಜಾರಿಗೆ ಬರತಕ್ಕದ್ದು.

**2. ಪ್ರಕರಣ 25ರ ತಿದ್ದುಪಡಿ.-** ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ಅಧಿನಿಯಮ, 1997 (2001ರ ಕರ್ನಾಟಕ ಅಧಿನಿಯಮ 33)ರ 25ನೇ ಪ್ರಕರಣದ (4)ನೇ ಉಪಪ್ರಕರಣದ, (ii)ನೇ ಖಂಡದಲ್ಲಿರುವ "ಅಥವಾ ಕಿವುಡ ಅಥವಾ ಮೂಕನಾಗಿದ್ದರೆ ಅಥವಾ ಕುಷ್ಟ" ಎಂಬ ಪದಗಳನ್ನು ಬಿಟ್ಟುಬಿಡತಕ್ಕದ್ದು.

## ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ
**(ವಿಧೇಯಕವನ್ನು ಮಂಡಿಸುವಾಗ ಲಗತ್ತಿಸಿದಂತೆ)**

ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ಅಧಿನಿಯಮ, 1997 (2001ರ ಕರ್ನಾಟಕ ಅಧಿನಿಯಮ 33)ನ್ನು,-

(i) ರಿಟ್ ಅರ್ಜಿ ಸಿವಿಲ್ ಸಂಖ್ಯೆ:1151/2017(ಸಾರ್ವಜನಿಕ ಹಿತಾಸಕ್ತಿ ಅರ್ಜಿ) ಕಾನೂನು ನೀತಿಗಾಗಿ ವಿಧಿ ಸೆಂಟರ್ ವಿರುದ್ಧ ಭಾರತ ಒಕ್ಕೂಟ ದಿನಾಂಕ:24-04-2018ರೊಂದಿಗೆ ಓದಲಾದ ಮಾನ್ಯ ಸರ್ವೋಚ್ಚ ನ್ಯಾಯಾಲಯದ ರಿಟ್ ಅರ್ಜಿ(ಸಿವಿಲ್) ಸಂಖ್ಯೆ:767/2014 ಪಂಕಜ್ ಸಿನ್ಹ ವಿರುದ್ಧ ಭಾರತ ಒಕ್ಕೂಟ, ದಿನಾಂಕ:05-07-2018ರ ತೀರ್ಪಿನ ಅನುಸರಣೆಯಲ್ಲಿ ಕುಷ್ಟರೋಗ ಬಾಧಿತ ವ್ಯಕ್ತಿಗಳಿಗಾಗಿ ; ಮತ್ತು

(ii) ಕಿವುಡ ಅಥವಾ ಮೂಕರಿಗಾಗಿ,

- ತಾರತಮ್ಯದ ಉಪಬಂಧವನ್ನು ರದ್ದುಗೊಳಿಸುವ ಸಂಬಂಧದಲ್ಲಿ ಮತ್ತಷ್ಟು ತಿದ್ದುಪಡಿ ಮಾಡುವುದು ಅವಶ್ಯಕವೆಂದು ಪರಿಗಣಿಸಿದೆ.

ಆದ್ದರಿಂದ ಈ ವಿಧೇಯಕ.

**ಆರ್ಥಿಕ ಜ್ಞಾಪನ ಪತ್ರ**

ಪ್ರಸ್ತಾವಿತ ಶಾಸನಾತ್ಮಕ ಕ್ರಮವು ಯಾವುದೇ ಹೆಚ್ಚಿನ ವೆಚ್ಚವನ್ನು ಒಳಗೊಂಡಿರುವುದಿಲ್ಲ.

**ರಾಮಲಿಂಗಾ ರೆಡ್ಡಿ**
ಸಾರಿಗೆ ಮತ್ತು ಮುಜರಾಯಿ ಮಂತ್ರಿ

**ಕೆ.ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

**ಅನುಬಂಧ**
**ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ಅಧಿನಿಯಮ, 1997ರ (2001ರ ಕರ್ನಾಟಕ ಅಧಿನಿಯಮ 33) ಉದ್ಧೃತ ಭಾಗ**

**XX XX XX**

25. **ವ್ಯವಸ್ಥಾಪನಾ ಸಮಿತಿಯ ರಚನೆ**.- **XX XX XX**

(4) ಯಾವೊಬ್ಬ ವ್ಯಕ್ತಿಯು,-

(i) ಒಂದು ಸಕ್ಷಮ ನ್ಯಾಯಾಲಯದಿಂದ ಅವಿಮುಕ್ತ ದಿವಾಳಿಯೆಂದು ಘೋಷಿತನಾಗಿದ್ದರೆ, ಅಥವಾ

(ii) ಅಸ್ವಸ್ಥ ಚಿತ್ತನಾಗಿದ್ದು ಮತ್ತು ಹಾಗೆಂದು ಸಕ್ಷಮ ನ್ಯಾಯಾಲಯದಿಂದ ಘೋಷಿಸಲಾಗಿದ್ದರೆ ಅಥವಾ ಕಿವುಡ ಅಥವಾ ಮೂಕನಾಗಿದ್ದರೆ ಅಥವಾ ಕುಷ್ಟ ಅಥವಾ ಇತರ ಯಾವುದೇ ಭಯಂಕರ ಅಥವಾ ಸಾಂಕ್ರಾಮಿಕ ಖಾಯಿಲೆಯಿಂದ ಪೀಡಿತನಾಗಿದ್ದರೆ, ಅಥವಾ

**XX XX XX**

ಸರ್ಕಾರಿ ಮುದ್ರಣಾಲಯ, ಸುವರ್ಣ ಸೌಧ, ಬೆಳಗಾವಿ, ಕಾಸೂ 47, ಪ್ರತಿಗಳು 250, 12ನೇ ಡಿಸೆಂಬರ್ 2025